ದಿನಾಂಕ 06.04.2026 ರಂದು ಸಾಕ್ಷಿಯನ್ನು ಕರೆಸಿ ವಿಧಿಬದ್ಧವಾದ ಪ್ರಮಾಣವಚನ ಭೋಧಿಸಲಾಯಿತು.

ಮುಂದುವರಿದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ ಎಮ್.ಆರ್ ವಕೀಲರಿಂದಃ

ಅಂಗವುನತ ಪ್ರಮಾಣ ಪತ್ರವನ್ನು ನಿಪಿ.20 ಎಂದು, 5 ಹೊರ ರೋಗಿ ಚೀಟಿಗಳು ನಿಪಿ.21 ಎಂದು ಕೆ.ವಿಜಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡ ಬಗ್ಗೆ ದಾಖಲೆಯನ್ನು ನಿಪಿ.22 ಎಂದು, ಸುಳ್ಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡ ಬಗ್ಗೆ ದಾಖಲೆಯನ್ನು ನಿಪಿ.23 ಎಂದು ಮತ್ತು ಎಕ್ಸ್ ರೇ ಯನ್ನು ನಿಪಿ.24 ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಎದುರುದಾರರ ಪರ ಶ್ರೀ ಕೆ.ಆರ್.ಆರ್ ವಕೀಲರಿಂದಃ

ನಾನು ಮೊದಲಿಗೆ ಸುಳ್ಯ ಆಸ್ಪತ್ರೆಯಲ್ಲಿ ನಂತರ ಕೆವಿಜಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿದ್ದು, ನಂತರ ಹೆಚ್ಚಿನ ಚಿಕಿತ್ಸೆಗಾಗಿ ಮಂಗಳೂರಿನ ಯಾನೆ ಪೋಯ ಆಸ್ಪತ್ರೆಯಲ್ಲಿ ದಾಖಲಾಗಿರುತ್ತೇನೆ. ಅಪಘಾತವಾದ ದಿನವೇ ಕೆವಿಜಿ ಆಸ್ಪತ್ರೆಯಲ್ಲಿ ದಾಖಲಾಗಿರುತ್ತೇನೆ. ಅದೇ ದಿನ ರಾತ್ರಿ ಯಾನಪೋಯ ಆಸ್ಪತ್ರೆಗೆ ಹೋಗಿ ದಾಖಲಾಗಿರುತ್ತೇನೆ. ನಾನು ಸುಳ್ಯ ಕೆವಿಜಿ ಆಸ್ಪತ್ರೆಯಲ್ಲಿ ಒಳರೋಗಿಯಾಗಿ ಚಿಕಿತ್ಸೆ ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಆ ರೀತಿ ಒಳರೋಗಿಯಾಗಿ ಚಿಕಿತ್ಸೆ ಪಡೆದುಕೊಂಡ ಬಗ್ಗೆ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ. ಆ ಬಗ್ಗೆ ದಾಖಲೆ ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ಅಪಘಾತವಾದ ದಿನ ರಾತ್ರಿ ಯಾನಪೋಯ ಆಸ್ಪತ್ರೆಯಲ್ಲಿ ಒಳರೋಗಿಯಾಗಿ ದಾಖಲಾಗಿರುತ್ತೇನೆ. ಅಲ್ಲಿ ಒಂದು ತಿಂಗಳಿಗೂ ಹೆಚ್ಚು ಕಾಲ ಚಿಕಿತ್ಸೆ ಪಡೆದುಕೊಂಡಿರುತ್ತೇನೆ. ಅಲ್ಲಿ ಬಿಡುಗಡೆಗೊಂಡಿದ ನಂತರ ನಾನು ಕೆವಿಜಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿರುತ್ತೇನೆ. ಯಾನಪೋಯ ಆಸ್ಪತ್ರೆಯಲ್ಲಿ ನಾನು ಅಂಗವುನತ ಪ್ರಮಾಣಪತ್ರ ನೀಡುವಂತೆ ಕೇಳಿರುವುದಿಲ್ಲ. ಕೆವಿಜಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಿದ ವೈದ್ಯರು ಹೆಸರು ನನಗೆ ಗೊತ್ತಿಲ್ಲ. ನಾನು ಅಪಘಾತವಾದ ಎರಡುವರೆ ವರ್ಷಗಳ ನಂತರ ಅಂಗವುನಗಳ ಪ್ರಮಾಣ ಪತ್ರ ಪಡೆದುಕೊಂಡಿರುತ್ತೇನೆ.

ನಾನು ಹೇಳಿದಂತೆ ನನಗೆ ಯಾವುದೇ ಶಾಶ್ವತ ಅಂಗವುನತೆ ಉಂಟಾಗಿರುವುದಿಲ್ಲ ಮತ್ತು ನಾನು ಯಾವುದೇ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರ ಪಡೆಯುವ ಉದ್ದೇಶದಿಂದ ನಿಪಿ.20 ರಿಂದ 24 ದಾಖಲೆಗಳನ್ನು ಸೃಷ್ಟಿ ಮಾಡಿ ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ. ನಾನು ಹೇಳಿದ ಅಪಘಾತಕ್ಕೂ ನಿಪಿ.1 ರಿಂದ 24 ದಾಖಲೆಗಳಿಗೂ ಯಾವುದೇ ಸಂಬಂಧವಿಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

(ಸಾ.ಓ.ಹೇ.ಕೇ.ಸ.ಇ.ಎ.ಒ)

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ಸುಳ್ಯ